ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ
ದಿನಾಂಕ : DATE 19/3/20

# ದಿಗ್ವಿಜಯ್, ಡಿಕೆಶಿ ಬಂಧನಕ್ಕೆ ಕಾಂಗ್ರೆಸ್ ಆಕ್ಷೇಪ

ಉ.ವಾ /19/3/20

ವಿಧಾನಸಭೆ: ಮಧ್ಯಪ್ರದೇಶ ಶಾಸಕರು ಉಳಿದುಕೊಂಡಿರುವ ನಗರದ ಹೊರವಲಯದ ಹೋಟೆಲ್ ಬಳಿ ಮಾಜಿ ಮುಖ್ಯಮಂತ್ರಿ ದಿಗ್ವಿಜಯ್ ಸಿಂಗ್, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಶಾಸಕರಾದ ರಿಜ್ವಾನ್ ಅರ್ಷದ್, ಡಾ. ರಂಗನಾಥ್ ಅವರನ್ನು ಬಂಧಿಸಿದ ವಿಚಾರ ಸದನದಲ್ಲಿ ಪ್ರಸ್ತಾಪವಾಗಿ ಕಾಂಗ್ರೆಸ್ ಸದಸ್ಯರು ಧರಣಿ ನಡೆಸಿದರು.

**ವಿಧಾನಮಂಡಲ ಅಧಿವೇಶನ**



ಶೂನ್ಯ ವೇಳೆಯಲ್ಲಿ ಕಾಂಗ್ರೆಸ್‌ನ ಎಚ್.ಕೆ.ಪಾಟೀಲ್ ವಿಷಯ ಪ್ರಸ್ತಾಪಿಸಿದಾಗ ಸಚಿವರಾದ ಕೆ.ಎಸ್ ಈಶ್ವರಪ್ಪ, ಜಗದೀಶ್ ಶೆಟ್ಟರ್, ಡಾ.ಸಿ.ಎನ್. ಅಶ್ವತ್ಥನಾರಾಯಣ ಸೇರಿ ಬಿಜೆಪಿ ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಸಿದ್ದರಾಮಯ್ಯ ಮಾತನಾಡಿ, ಈ ಮನೆಯ ಸದಸ್ಯರಾದ ಡಿಕೆಶಿ ಸೇರಿ ಹಲವರನ್ನು ಬಂಧಿಸಲಾಗಿದೆ. ಈ ವಿಷಯ ಸ್ಪೀಕರ್ ಗಮನಕ್ಕೆ ಬಂದಿದೆಯಾ? ಎಂದು ಪ್ರಶ್ನಿಸಿದರು. ಇದು ಕಾಂಗ್ರೆಸ್-ಬಿಜೆಪಿ ಸದಸ್ಯರ ನಡುವೆ ಮಾತಿನ ಚಕಮಕಿಗೆ ಕಾರಣವಾಯಿತು. ಆದರೆ, ಸ್ಪೀಕರ್ ಚರ್ಚೆಗೆ ಅವಕಾಶ ನೀಡಲಿಲ್ಲ, ಗದ್ದಲದ ನಡುವೆಯೇ ವರದಿ ಮಂಡನೆ, ವಿಧೇಯಕ ಮಂಡನೆ, ಕಾಗದ ಪತ್ರಗಳ ಮಂಡನೆ ನಡೆಸಿ, ಸದನವನ್ನು ಮಧ್ಯಾಹ್ನ 3 ಗಂಟೆಗೆ ಮುಂದೂಡಿದರು.

## ವರ್ಗಾವಣೆ ವಿಧೇಯಕಕ್ಕೆ ಪರಿಷತ್ ಅನುಮೋದನೆ

ವಿಧಾನ ಪರಿಷತ್: ಶಿಕ್ಷಕರ ಹೊಸ ನೇಮಕಾತಿ ಅಥವಾ ಬಡ್ತಿ ಮೇಲೆ ಮೊದಲ ಸ್ಥಳ ನಿಯುಕ್ತಿ ಸಂದರ್ಭದಲ್ಲಿ 10 ವರ್ಷ ಗ್ರಾಮೀಣ ಸೇವೆ ಕಡ್ಡಾಯ, ಮಾಜಿ ಸೈನಿಕ, ಹುತಾತ್ಮ ಸೈನಿಕ ಪತ್ನಿಗೆ ವಿನಾಯ್ತಿ ಸೇರಿದಂತೆ ಹಲವು ಅಂಶಗಳನ್ನು ಒಳಗೊಂಡಿರುವ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ವಿಧೇಯಕ-2020ಕ್ಕೆ ವಿಧಾನ ಪರಿಷತ್‌ನಲ್ಲಿ ಬುಧವಾರ ಅನುಮೋದನೆ ದೊರೆತಿದೆ. ವಿಧಾನಸಭೆಯಲ್ಲಿ ಅನುಮೋದನೆಗೊಂಡಿರುವ ಈ ವಿಧೇಯಕವನ್ನು ಬುಧವಾರ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವ ಸುರೇಶ್ ಕುಮಾರ್, ಪರಿಷತ್‌ನಲ್ಲಿ ಮಂಡಿಸಿದರು. ಸಭಾಪತಿ ಪ್ರತಾಪ್ ಚಂದ್ರ ಶೆಟ್ಟಿಯವರು ಧ್ವನಿಮತಕ್ಕೆ ಹಾಕಿ, ಸದನದ ಅನುಮತಿ ಪಡೆದು, ಅಂಗೀಕರಿಸಿದರು.

## 'ಸರ್ವಪಕ್ಷ ನಿಯೋಗದೊಂದಿಗೆ ಹೋಗೋಣ'

ವಿಧಾನಸಭೆ: 15ನೇ ಹಣಕಾಸು ಆಯೋಗದ ಶಿಫಾರಸಿನಿಂದ ರಾಜ್ಯಕ್ಕೆ ಸುಮಾರು 11 ಸಾವಿರ ಕೋಟಿ ರೂ.ಅನುದಾನ ಕಡಿಮೆಯಾಗಲಿದೆ. ರಾಜ್ಯದ ಹಣ ಪಡೆಯಲು ಕೇಂದ್ರದ ಬಳಿ ಸರ್ವಪಕ್ಷ ನಿಯೋಗ ತೆಗೆದುಕೊಂಡು ಹೋಗಬೇಕು ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ. ಬಜೆಟ್ ಮೇಲಿನ ಚರ್ಚೆ ಆರಂಭಿಸಿದ ಅವರು, ಕೇಂದ್ರದಿಂದ ರಾಜ್ಯಕ್ಕೆ ಸುಮಾರು 11,887 ಕೋಟಿ ರೂ.ಬಾಕಿ ಹಣ ಬಂದಿಲ್ಲ, ಜಿಎಸ್‌ಟಿ, ವಿವಿಧ ಅನುದಾನಗಳ ಬಾಕಿ ಬಂದಿಲ್ಲ, ಕಳೆದ ಆರ್ಥಿಕ ವರ್ಷದಲ್ಲಿ ಕೇಂದ್ರದಿಂದ 16 ಸಾವಿರ ಕೋಟಿ ರೂ.ಬಂದಿಲ್ಲ, 15ನೇ ಹಣಕಾಸು ಆಯೋಗದಿಂದ 5,495 ಕೋಟಿ ರೂ.ಗಳನ್ನು ರಾಜ್ಯಕ್ಕೆ ಕೊಡಲು ನಿರ್ಧರಿಸಲಾಗಿತ್ತು. ಈ ಹಣವನ್ನು ಕರ್ನಾಟಕಕ್ಕೆ ಕೊಡಬೇಡಿ ಎಂದು ನಿರ್ಮಲಾ ಸೀತಾರಾಮನ್ ಪತ್ರ ಬರೆದಿದ್ದಾರೆ. ನಿರ್ಮಲಾ ಸೀತಾರಾಮನ್ ನಮ್ಮ ರಾಜ್ಯದಿಂದ ಆಯ್ಕೆಯಾಗಿ ಹೋದವರು. ಹೀಗೆ ಮಾಡ್ತಾರೆ ಅಂತ ಅಂದ್ಕೊಂಡಿರಲಿಲ್ಲ, ಇಷ್ಟೊಂದು ಹಣ ಕೊರತೆಯಾದ ಮೇಲೆ ನಿರ್ವಹಣೆ ಹೇಗೆ ಎಂದು ಪ್ರಶ್ನಿಸಿದರು. ರಾಜ್ಯದಿಂದ ಬಿಜೆಪಿಯ 25 ಎಂಪಿಗಳೂ ಹೋಗಿ ಕೇಂದ್ರದ ಮುಂದೆ [illegible] ಎಂದು ಆಗ್ರಹಿಸಿದರು.



## ಸಾರ್ವಜನಿಕರಿಗೆ ಪರಿಷತ್ ಕಲಾಪ ವೀಕ್ಷಣೆಗೆ ನಿಷೇಧ

ವಿಧಾನ ಪರಿಷತ್: ಕೊರೊನಾ ಭೀತಿ ಹಿನ್ನೆಲೆಯಲ್ಲಿ ಕಲಾಪ ವೀಕ್ಷಿಸಲು ಬರುವ ಸಾರ್ವಜನಿಕರ ಪ್ರವೇಶಕ್ಕೆ ನಿಷೇಧ ಹೇರಲಾಗಿದೆ. ಬುಧವಾರ ಸದನದಲ್ಲಿ ಈ ಕುರಿತು ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿಯವರು ಪ್ರಕಟಣೆ ಹೊರಡಿಸಿದ್ದು, ಕೊರೊನಾ ಹಿನ್ನೆಲೆಯಲ್ಲಿ ಮುಂದಿನ ಆದೇಶದವರೆಗೆ ವೀಕ್ಷಕರ ಗ್ಯಾಲರಿಗೆ ಸಾರ್ವಜನಿಕರ ಪ್ರವೇಶ ನಿಷೇಧಿಸಲಾಗಿದೆ. ಶಾಸಕರು ಹಾಗೂ ಸಚಿವರು ವೀಕ್ಷಕರ ಗ್ಯಾಲರಿ ಪ್ರವೇಶ ಕೋರಿ ಮನವಿ ಸಲ್ಲಿಸಬಾರದು. ಪಾಸ್ ಕೂಡ ವಿತರಿಸಬಾರದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಖಾಸಗಿ ಲ್ಯಾಬ್ ಪರೀಕ್ಷೆಗೆ ಅವಕಾಶಕ್ಕೆ ಆಗ್ರಹ

ವಿಧಾನಸಭೆ: ರಾಜ್ಯ ಸರ್ಕಾರ ಕೊರೊನಾ ಸೋಂಕು ಪತ್ತೆ ಹಚ್ಚಲು ರಾಜ್ಯದಲ್ಲಿ ಸರ್ಕಾರದ ವತಿಯಿಂದ ಹೆಚ್ಚಿನ ಪ್ರಯೋಗಾಲಯಗಳಿಲ್ಲದ ಕಾರಣ ಖಾಸಗಿ ಆಸ್ಪತ್ರೆಯಲ್ಲಿ ತಪಾಸಣೆ ಮಾಡಿಸಿಕೊಳ್ಳಲು ಅವಕಾಶ ಕಲ್ಪಿಸಿಕೊಡುವಂತೆ ಕಾಂಗ್ರೆಸ್‌ನ ಸದಸ್ಯರು ಸರ್ಕಾರಕ್ಕೆ ಸಲಹೆ ನೀಡಿದರು.

ರಾಜ್ಯದಲ್ಲಿ ಸರ್ಕಾರದ ವತಿಯಿಂದ ಕೇವಲ 5 ಪ್ರಯೋಗಾಲಯಗಳಲ್ಲಿ ಪರೀಕ್ಷೆ ಮಾಡಲಾಗುತ್ತಿದೆ. ಖಾಸಗಿ ಪ್ರಯೋಗಾಲಯಗಳಲ್ಲಿ ಪರೀಕ್ಷೆ ನಡೆಸಿದರೆ, ಹೆಚ್ಚಿನ ಜನರು ವೇಗವಾಗಿ ಪರೀಕ್ಷೆ ಮಾಡಿಸಿಕೊಂಡು ಸಂಶಯ ನಿವಾರಿಸಿಕೊಳ್ಳಲು ಅನುಕೂಲವಾಗುತ್ತದೆ ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಸಲಹೆ ನೀಡಿದರು. ಅಲ್ಲದೇ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ನಿರಾಕರಿಸದಂತೆ ಸರ್ಕಾರ ಕಟ್ಟುನಿಟ್ಟಿನ ಆದೇಶ ಮಾಡಬೇಕು. ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುವ ಸೋಂಕಿತರ ವೆಚ್ಚವನ್ನು ರಾಜ್ಯ ಸರ್ಕಾರವೇ ಭರಿಸಬೇಕು ಎಂದು ಸಲಹೆ ನೀಡಿದರು. ಎಸ್‌ಡಿಆರ್‌ಎಫ್ ಫಂಡ್ ಜೊತೆಗೆ ರಾಷ್ಟ್ರೀಯ ಆರೋಗ್ಯ ಮಿಷನ್‌ನ ಹಣವನ್ನು ರಾಜ್ಯ ಸರ್ಕಾರ ಬಳಸಿಕೊಳ್ಳಬೇಕು ಎಂದು ಆರ್.ವಿ.ದೇಶಪಾಂಡೆ ಸಲಹೆ ನೀಡಿದರು.